**ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 619/2023**

ಪಿರ್ಯಾದಿ: ರಾಜ್ಯದ ಪರವಾಗಿ ಅಜ್ಜಂಪುರ ಪೊಲೀಸರು

- ವಿರುದ್ಧ -

ಆರೋಪಿ/ತರುಃ

ಶ್ರೀ ಮಂಜುನಾಥ ಬಿನ್ ಶ್ರೀ ನಾರಾಯಣಪ್ಪ, 33 ವರ್ಷ, ವಾಸಃ ನಾಗವಂಗಲ, ಅಜ್ಜಂಪುರ ಕುಡೂಲ್ಲರು ತಾಲ್ಲೂಕು

****

**ದೋಷಾರೋಪಣೆ**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 20.10.2021 ರಂದು ಸಂಜೆ 5.25 ಗಂಟೆ ಸಮಯದಲ್ಲಿ ಅಜ್ಜಂಪುರ ಪೊಲೀಸ್ ಠಾಣಾ ಸರಹದ್ದಿನ ನಾಗವಂಗಲ ಗ್ರಾಮದಲ್ಲಿ ಆರೋಪಿಯಾದ ನೀವು ಒಟ್ಟು ರೂ.1,370/- ಬೆಲೆಯ 90 ಎಂ.ಎಲ್.ನ ರಾಜಾ ವಿಸ್ಕಿಯ 39 ಪೌಚ್‌ಗಳನ್ನು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ರೂ.1,370/- ಬೆಲೆಯ 90 ಎಂ.ಎಲ್.ನ ರಾಜಾ ವಿಸ್ಕಿಯ 39 ಪೌಚ್‌ಗಳನ್ನು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಮಾರಾಟ ಮಾಡುವ ಉದ್ದೇಶದಿಂದ ಇಟ್ಟುಕೊಂಡಿದ್ದು, ಆದಕಾರಣ ಆರೋಪಿಯಾದ ನೀವು

ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 20.05.2024

ಸಹಿ/-
(ಶಿವಕುಮಾರ್.ಆರ್)
ಸಿವಿಲ್ ನ್ಯಾಯಾಧೀಶರು ಮತ್ತು
ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ.